ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಮಿತಿ (RDPR)

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 13/12/19

ಕ್ರಮ ಕೈಗೊಳ್ಳಿ

ಪಾಲಿಕೆ ಅಧಿಕಾರಿಗಳ ನಿರ್ಲಕ್ಷ್ಯದಿಂದಲೇ ದುರಂತ: ಸದನ ಸಮಿತಿ ಅಧ್ಯಕ್ಷ ಆರಗ ಜ್ಞಾನೇಂದ್ರ

# 'ಹುಳಿಮಾವು ಕೆರೆ ದುರಂತಕ್ಕೆ ಬಿಬಿಎಂಪಿ ಹೊಣೆ'

• ಕನ್ನಡಪ್ರಭ ವಾರ್ತೆ ಬೆಂಗಳೂರು

ಹುಳಿಮಾವು ಕೆರೆ ನಿರ್ವಹಣೆ ಜವಾಬ್ದಾರಿ ವಹಿಸಿಕೊಂಡಿದ್ದ ಬಿಬಿಎಂಪಿ ಅಧಿಕಾರಿಗಳ ನಿರ್ಲಕ್ಷ್ಯದಿಂದ ಕೆರೆ ಏರಿ ಒಡೆದು ಹಾನಿ ಉಂಟಾಗಿರುವುದರಿಂದ ಪಾಲಿಕೆ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳುವಂತೆ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ ಅಧ್ಯಕ್ಷ ಆರಗ ಜ್ಞಾನೇಂದ್ರ ಸೂಚಿಸಿದ್ದಾರೆ.

ಗುರುವಾರ ಸಮಿತಿ ಸದಸ್ಯರು ಹುಳಿಮಾವು ಕೆರೆಯ ಏರಿ ಒಡೆದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕೆರೆ ಏರಿ ಒಡೆದ ನಂತರ ಪಾಲಿಕೆಯಿಂದ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿದರು. ಈ ವೇಳೆ ಅನಾಹುತಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ತಾಕೀತು ಮಾಡಿದರು. ಪೊಲೀಸ್ ಮತ್ತು ಸರ್ಕಾರ ರಚನೆ



ಹುಳಿಮಾವು ಕೆರೆಯ ಸುತ್ತಲಿನ ಸ್ಥಳಗಳನ್ನು ಸದನ ಸಮಿತಿ ಅಧ್ಯಕ್ಷ ಆರಗ ಜ್ಞಾನೇಂದ್ರ ಪರಿಶೀಲಿಸಿದರು. ಶಾಸಕ ಸತೀಶ್ ರೆಡ್ಡಿ, ಡಿ.ರಂದೀಪ್ ಇನ್ನಿತರರಿದ್ದರು.

ಮಾಡಿರುವ ಸಮಿತಿ ವರದಿ ನೀಡುವವರೆಗೆ ಕಾಯುವುದು ಬೇಡ, ಬಿಬಿಎಂಪಿಯೇ ಆಂತರಿಕ ತನಿಖೆ ನಡೆಸಿ ಕ್ರಮ ಕೈಗೊಳ್ಳಲಿ ಎಂದು ಸೂಚಿಸಿದರು. ಜತೆಗೆ ಪ್ರವಾಹ ಉಂಟಾದ ಪ್ರದೇಶದಲ್ಲಿ ಮತ್ತಷ್ಟು ಸ್ವಚ್ಛತೆ ಕಾಪಾಡಿಕೊಳ್ಳಬೇಕು, ಜತೆಗೆ ಕೆರೆ ಒತ್ತುವರಿ ತೆರವು ಮಾಡಬೇಕು, ಸಮಿತಿ ಪರಿಶೀಲನೆ ಮಾಡಿ ನೀಡಿರುವ ಸೂಚನೆಗಳನ್ನು ಕಾರ್ಯರೂಪಕ್ಕೆ ತಂದಿರುವ ಬಗ್ಗೆ ವಾರದಲ್ಲಿ ವರದಿ ನೀಡುವಂತೆ ಸಮಿತಿ ಅಧ್ಯಕ್ಷ ಆರಗ ಜ್ಞಾನೇಂದ್ರ ಸೂಚನೆ ನೀಡಿದ್ದಾರೆ.

ಈ ಕುರಿತು ಪ್ರತಿಕ್ರಿಯೆ ನೀಡಿದ ಬಿಬಿಎಂಪಿ ವಿಶೇಷ ಆಯುಕ್ತ ಡಿ. ರಂದೀಪ್, ಸಮಿತಿಯು ನೀಡಿರುವ ನಿರ್ದೇಶನಗಳ ಕುರಿತು ಬಿಬಿಎಂಪಿ ಆಯುಕ್ತರೊಂದಿಗೆ ಚರ್ಚೆ ಮಾಡಿ ಶೀಘ್ರ ಕ್ರಮ ತೆಗೆದುಕೊಳ್ಳಲಾಗುವುದು. ಎರಡನೇ ಹಂತದಲ್ಲಿ 23 ಮನೆಗಳಿಗೆ ಹಾನಿ ಆಗಿರುವುದು ಪತ್ತೆ ಆಗಿದ್ದು, ಅವರಿಗೂ ಪರಿಹಾರ ನೀಡಲಾಗುವುದು ಎಂದು ತಿಳಿಸಿದರು. ಈ ವೇಳೆ ಬೊಮ್ಮನಹಳ್ಳಿ ಶಾಸಕ ಸತೀಶ್ ರೆಡ್ಡಿ, ವಲಯದ ಜಂಟಿ ಆಯುಕ್ತ ರಾಮಕೃಷ್ಣ, ಮುಖ್ಯ ಎಂಜಿನಿಯರ್ ಸಿದ್ದೇಗೌಡ, ಕೆರೆ ವಿಭಾಗದ ಮುಖ್ಯ ಎಂಜಿನಿಯರ್ ಮೋಹನ್ ಕೃಷ್ಣ ಮೊದಲಾದವರು ಉಪಸ್ಥಿತರಿದ್ದರು.